ತುಮಕೂರು ಡಿಸ್ಟ್ರಿಕ್ಟ್.

ಸ್ಥಿರಸ್ವತ್ತಿನ ಹರಾಜು ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

1. ಕಂದಾಯದ ಬಾಕಿದಾರರಾದ ತಿಪಟೂರು ತಾಲ್ಲೂಕು ಜೋಡಿ ಹುಲಿಸಂದ್ರ ಗ್ರಾಮ ಜೋಡಿದಾರರಿಂದ ಬರಬೇಕಾದ ಜಮಾ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗುವ ಹಿಡುವಳಿ ಹಕ್ಕು ತಪ್ಪಿಸಲ್ಪಟ್ಟ ಸ್ಥಿರಸ್ವತ್ತು ವ್ಯಕ್ತಿವಾರ್ ತುಮಕೂರು ಡಿಸ್ಟ್ರಿಕ್ಟ್ ತಿಪಟೂರ್ ತಾಲ್ಲೂಕು ತಿಪಟೂರ್ ಗ್ರಾಮದಲ್ಲಿ 1896ನೇ ಜುಲೈ 20ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟು ಇದೆ.

ಹರಾಜು ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 189 ನೇ ಸಾಲಿಗೆ* ಬಾಕಿ ಕಂದಾಯದ ಬಗ್ಗೆ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಬ್ಕೆಯಲ್ಲಿ ನಮೂದಿಸಿರುವ ತಪ್ಶೀಲ್ ಮೇರಿಗೆ 245—13—0 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜು ಮೊಬಲಗಿನ ಶೇಕಡಾ 25ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದುಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜ್ ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಪಿಜಂಟಿ ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನು ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯುಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜು ಮೊಬಲಗನ್ನ ಪೂರ್ತಿಯಾಗಿ ಪಾವತಿ ಮಾಡಿದಮೇಲೆ ಡೆಪ್ಯುಟಿ ಕಮ್ಮಿಷನರವರಿಂದ ಹರಾಜು ಮಂಜೂರ್ ಮಾಡಲ್ಪಟ್ಟ ಕೂಡ್ಲೇ ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮ್ಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಒಂದು ಹರಾಜು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯುಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿ ಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

ಡಿಸ್ಟ್ರಿಕ್ಟು.	ತಾಲ್ಲೂಕು.	ಹೋಬಳಿ.	ಗ್ರಾಮ.	ಜೋಡಿದಾರ್ರ ಹೆಸರು.	ವೃತ್ತಿ.	ವಟ್ಟುಗ್ರಾಮದ ವಿಸ್ತೀರ್ಣದ ಅಂದಾಜು.			ವಟ್ಟುಗ್ರಾಮದ ವಟ್ಟುಬೇರಿಜನ ಅಂದಾಜು.			ಸಾಲಿಯಾನಾ ಸರಕಾರಕ್ಕೆ ಕೊಡಬೇಕಾದ ಕ್ವಿಟ್‌ರೆಂಟ್.			ವ್ಯಕ್ತಿವಾರ್ ಎಪ್ಪುಬಾಕಿ ಬಗ್ಗೆ ಗ್ರಾಮ ಹರಾಜು ಮಾಡಲ್ಪಡುತ್ತೆ.			ಹರಾಜು ತಾರೀಖು.
						ಖ.	ಕೊ.	ಪ.										
ತುಮಕೂರು	ತಿಪಟೂರು	ಕಳ್ಳನಹಳ್ಳಿ	ಜೋಡಿಹುಲಿಸಂದ್ರಗ್ರಾಮ	1 ಸೂರಪ್ಪ	$4\frac{1}{4}$	ಖುಷ್ಕಿ ತರೀ	37	1	0	600	0	0	408	2	9	53	13	8	1896ನೇ ಇಸವಿ ಜುಲೈ 20ದಿವ್ಸ ತಿಪಟೂರ ತಾಲ್ಲೂಕು ಆಪೀಸಿನಲ್ಲಿ ಬಹಿರಂಗವಾಗಿ ಹರಾಜು ಮಾಡಲ್ಪಡುತ್ತೆ.
				2 ತಿಮ್ಮಪ್ಪಯ್ಯ	$3\frac{1}{2}$											47	0	5	
				3 ಮೂಲೆಮನೆ ನಾರಣಪ್ಪ	4											50	11	0	
				4 ಶಾಮಾವಧಾನಿಗಳ ವೆಂಕಟೇಶಭಟ್ಟ	$3\frac{3}{8}$		34	1	8							22	2	9	
						ಖರಾಬು	16	16	6							12	10	9	
				5 ರಾಮಸ್ವಾಮಯ್ಯ	$1\frac{3}{4}$											16	10	1	
				6 ರಾಂಭಟ್ಟರ ಸುಬ್ಬಯ್ಯ	1		87	18	14										
				7 ಮಾಲೆಕಲ್ಲಯ್ಯನ ನಾರಣಪ್ಪ	$1\frac{5}{16}$														

ಯಂ. ನಾರಾಯಣರಾವ್,
ಅಫಿಷಿಯೇಟಿಂಗ್ ಡೆಪ್ಯುಟಿ ಕಮ್ಮಿಷನರ್.